<u>ಓ.ಎಸ್. – 131/2021</u>

ಪಿ. ಡಬ್ಲೂ – 1

<u>ಸಾಕ್ಷಿಯನ್ನು ದಿಃ 06.01.2026 ರಂದು ಪುನಃ ಕರೆಯಿಸಿ ಪ್ರಮಾಣೀಕರಿಸಲಾಯಿತು.</u>

**<u>ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಾದ ಶ್ರೀ. ವಿ.ಕೆ.ಎಂ ರವರಿಂದಃ–</u>**

ಈ ಕೇಸಿನ ಬಗ್ಗೆ ನನಗೆ ಮಾಹಿತಿ ಇಲ್ಲ ಎನ್ನುವುದು ಸರಿಯಲ್ಲ. ನಾನು ಪ್ರತಿವಾದಿ ಬ್ಯಾಂಕಿಗೆ ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ 7,23,078/– ರೂ. ಗಳನ್ನು ತುಂಬಿಲ್ಲ ಎನ್ನುವುದು ಸರಿಯಲ್ಲ.

ಅಂತಹ ಯಾವುದೇ ದಾಖಲೆಗಳು ನನ್ನ ಬಳಿ ಇಲ್ಲ ಎಂದರೆ ಸರಿಯಲ್ಲ. ನನ್ನ ವಾದ ಪತ್ರದಲ್ಲಿ ಹೇಳಿದ 2,10,000/- ರೂ. ಗಳನ್ನು ಸಹ ಪ್ರತಿವಾದಿ ಬ್ಯಾಂಕಿಗೆ ಪಾವತಿ ಮಾಡಿಲ್ಲ ಎನ್ನುವುದು ಸರಿಯಲ್ಲ. ವಾದ ಪತ್ರದ 2 ನೇ ಕಂಡಿಕೆಯಲ್ಲಿ ಬೆರಳಚ್ಚು ಮಾಡುವಾಗ 7,23,078/- ರೂ. ಎನ್ನುವ ಬದಲಾಗಿ 2,10,000/- ರೂ. ಎಂದು ತಪ್ಪಾಗಿ ನಮೂದಾಗಿರುವುದು ಇತ್ತೀಚೆಗೆ 2-3 ತಿಂಗಳ ಹಿಂದೆ ನನಗೆ ತಿಳಿಯಿತು. ಪ್ರತಿವಾದಿ ಬ್ಯಾಂಕಿಗೆ ಸಾಲದ ಹಣವನ್ನು ಮರು ಪಾವತಿ ಮಾಡುವ ಬಾಧ್ಯತೆಯಿಂದ ತಪ್ಪಿಸಿಕೊಳ್ಳಲು ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವೆಯಲ್ಲಿ ಕೋರಿದ ಯಾವುದೇ ಪರಿಹಾರಕ್ಕೆ ನಾನು ಅರ್ಹನಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)

ಓದಿ ಹೇಳಿ ಕೇಳಿ ಸರಿ ಇದೆ

ಪ್ರಧಾನ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.